ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ, ನ್ಯಾಯಾಲಯ,
ಕುಣಿಗಲ್.

ಸಿ.ಸಿ.ನಂ. 4168-2023

ಸಿ.ಡಬ್ಲ್ಯೂ -06
ಪಿ.ಡಬ್ಲ್ಯೂ-05

ಸಾಕ್ಷಿದಾರನ ಹೆಸರು :- ಎಂ.ಸಿ ಚನ್ನಕೇಶವ
ತಂದೆಯ ಹೆಸರು :- ಚನ್ನಯ್ಯ
ವಯಸ್ಸು :- 60 ವರ್ಷ
ಉದ್ಯೋಗ :- ವ್ಯವಸಾಯ
ವಾಸ :-ಮಾರ್ಕೋನಹಳ್ಳಿ

**ಸಾಕ್ಷಿಗೆ ದಿಃ 18.11.2025 ರಂದು ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ- ಮಾನ್ಯ ಸ.ಸ.ಅ ರವರಿಂದ.**

ನನಗೆ ಪ್ರಕರಣದ ಬಗ್ಗೆ ಏನು ಗೊತ್ತಿಲ್ಲ. ಆರೋಪಿಯನ್ನು ನೋಡಿರುವುದಿಲ್ಲ. ಪೋಲಿಸರು ಮುಂದೆ ಹೇಳಿಕೆ ನೀಡಿರುವುದಿಲ್ಲ.

**(ಈ ಹಂತದಲ್ಲಿ ಮಾನ್ಯ ಸ.ಸ.ಅ ರವರು ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲಿಗಾಗಿ ನ್ಯಾಯಾಲಯದ ಅನುಮತಿಯನ್ನು ಕೋರಿರುತ್ತಾರೆ. ಅನುಮತಿಸಲಾಗಿದೆ.**

**ಪಾಟೀ ಸವಾಲುಃ- ಮಾನ್ಯ ಸ.ಸ.ಅ ರವರಿಂದ.**

ದಿಃ 08.08.2010 ರಂದು ಸಂಜೆ 5.15 ಗಂಟೆಯ ಸಮಯದಲ್ಲಿ ನಮ್ಮ ಊರಿನಿಂದ ತಿಗಳರಪಾಳ್ಯ ಕಡೆಗೆ ಹೋಗುವ ಪಂಪಹೌಸ್ ಹತ್ತಿರ ಜಮೀನಿನಲ್ಲಿ ನಾನು ಕೆಲಸ ಮಾಡಿಕೊಂಡು ಇರುವಾಗ ಚಾಸಾ 1 ಅವರು ನಮ್ಮ ಊರ ಕಡೆಯಿಂದ ಅವರ ತೋಟದ ಕಡೆಗೆ ಹೋಗುತ್ತಿದ್ದು ಯಾರೋ 3 ಜನ ಆಸಾಮಿಗಳು ಕೆ.ಎ 06 ಡಬ್ಲ್ಯೂ 5335 ನೇದರಲ್ಲಿ ಬಂದು ಚಾಸಾ 1 ಅವರ ಪಕ್ಕದಲ್ಲಿ ವಾಹನವನ್ನು ನಿಲ್ಲಿಸಿ ಅವರ ಕೊರಳಲ್ಲಿದ್ದ ಚಿನ್ನದ ಸರವನ್ನು ಕಿತ್ತುಕೊಂಡು ಹೋಗಿರುತ್ತಾರೆ ಎಂದರೆ ಸರಿಯಲ್ಲ. ಅದೇ ದಿನ ಸಂಜೆ ಅವರು ಅಮೃತೂರು ಠಾಣೆಗೆ ದೂರನ್ನು ನೀಡಿದ್ದು ಪೋಲಿಸರು ಆರೋಪಿತರನ್ನು ಹಿಡಿದಿದ್ದು ದಿಃ

09.08.2010 ರಂದು  ನಾನು ಚಾಸಾ 1 ಅವರೊಂದಿಗೆ ಠಾಣೆಗೆ ಬಂದಿದ್ದು ಆರೋಪಿಯನ್ನು ನೋಡಿರುತ್ತೇನೆ ಎಂದರೆ ಸರಿಯಲ್ಲ. ಆರೋಪಿನು ಈ ಮೊದಲಿನಿಂದಲೂ ಹಲವಾರು ಕಳ್ಳತನ ಪ್ರಕರಣದಲ್ಲಿ ಭಾಗಿ ಆಗಿರುತ್ತಾನೆಂದು ಗೊತ್ತಾಗಿರುತ್ತದೆ ಎಂದರೆ ಸರಿಯಲ್ಲ. ಅದೇ ರೀತಿ ಅವರು ನಾಗರತ್ನಮ್ಮಾ ಅವರ ಚಿನ್ನದ ಚೈನನ್ನು ಕಿತ್ತುಕೊಂಡು ಬರುವಾಗ ಚಾಸಾ 1 ಅವರ ಚಿನ್ನದ ಚೈನನ್ನು ಕಿತ್ತುಕೊಂಡು ಹೋಗಿರುತ್ತಾರೆ ಮತ್ತು ಇದೇ ರೀತಿ ಅವರು ಬೆಳ್ಳಿಯ ದೀಪಾಲೆ ಕಂಬ ಮತ್ತು ಇತರ ವಸ್ತುಗಳನ್ನು ಕಳ್ಳತನ ಮಾಡಿರುತ್ತಾರೆ ಎಂದರೆ ಸರಿಯಲ್ಲ.

ನಾನು ದಿಃ 09.08.2010 ರಂದು ನನ್ನ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆಯನ್ನು ನಿ.ಪಿ 7 ಎಂದು ಗುರುತಿಸಲಾಯಿತು. ಪ್ರಕರಣದ ಬಗ್ಗೆ ನನಗೆ ಎಲ್ಲಾ ಮಾಹಿತಿ ಇದ್ದರೂ ಸಹ ಆರೋಪಿತರಿಗೆ ಸಹಾಯ ಮಾಡುವ ಉದ್ದೇಶದಿಂದ ನಾನು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಆರೋಪಿ ಪರ  ಪಾಟೀ ಸವಾಲು ಇಲ್ಲವೆಂದು ನಿವೇದಿಸಿಕೊಂಡಿರುತ್ತಾರೆ.**

**ಮರು ವಿಚಾರಣೆ ಇಲ್ಲಃ**

ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)

ಓ.ಹೇ.ಕೇ.ಸರಿ ಇದೆ.

ಸಹಿ/-

ಅಪರ  ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.

ಕುಣಿಗಲ್.